# OCTOBER 01 2023
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ಶ್ರಮದಾನದ ಮೂಲಕ ತ್ಯಾಜ್ಯ ಮುಕ್ತ ಭಾರತ ನಿರ್ಮಾಣಕ್ಕೆ ಕೈಜೋಡಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ.**
- **ಸಮನ್ವಯ, ಸೌಹಾರ್ದತೆ ದೇಶದ ಪ್ರಗತಿಗೆ ಸಹಕಾರಿ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ಮುನಿರಾಬಾದ್–ಮೆಹಬೂಬ್‌ನಗರ್ ರೈಲು ಸಂಚಾರ ಸೇವೆಗೆ ಪ್ರಧಾನಮಂತ್ರಿ ಇಂದು ಚಾಲನೆ.**
- **ಸರ್ಕಾರದ ಸೌಲಭ್ಯಗಳು ಅರ್ಹರಿಗೆ ತಲುಪಿಸುವ ನಿಟ್ಟಿನಲ್ಲಿ ಆಡಳಿತ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುವಂತೆ ಸಚಿವ ಎಚ್.ಕೆ.ಪಾಟೀಲ ಅಧಿಕಾರಿಗಳಿಗೆ ಸೂಚನೆ.**

**ಈಗ ವಾರ್ತೆಗಳ ವಿವರ**

**ರಾಷ್ಟ್ರಪಿತ ಮಹಾತ್ಮ ಗಾಂಧಿ ಜಯಂತಿ ಮುನ್ನ ದಿನವಾದ ಇಂದು** ಒಂದು ಗಂಟೆ ಅವಧಿಯ ಶ್ರಮದಾನದ ಮೂಲಕ ನಮ್ಮ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯ ಕೈಗೊಂಡು, ತ್ಯಾಜ್ಯ ಮುಕ್ತ ಭಾರತ ನಿರ್ಮಾಣಕ್ಕೆ ಕೈಜೋಡಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. 'ಸ್ವಚ್ಛ ಭಾರತ್, ಹೈ ಸೇವಾ' ಯೋಜನೆಗೆ ಸಂಬಂಧಿಸಿದಂತೆ, ಕನ್ನಡ ಸೇರಿದಂತೆ ವಿವಿಧ ಭಾಷೆಗಳಲ್ಲಿ ಮೊಬೈಲ್ ರಿಂಗ್‌ಟೋನ್‌ಗಳನ್ನು ಅಳವಡಿಸಲಾಗಿದ್ದು, ಸಾರ್ವಜನಿಕರು ಸ್ವಚ್ಛ ಭಾರತ್, ಹೈ ಸೇವಾ ಡಾಟ್ ವೆಬ್‌ಸೈಟ್ ಅಥವಾ ಅದರಲ್ಲಿರುವ ಕ್ಯೂಆರ್ ಕೋಡ್ ಬಳಸಿ ತಮ್ಮ ಮೊಬೈಲ್‌ಗಳಲ್ಲಿ ರಿಂಗ್‌ಟೋನ್ ಡೌನ್‌ಲೋಡ್ ಮಾಡಿಕೊಳ್ಳುವಂತೆ ಮನವಿ ಮಾಡಿದ್ದಾರೆ. ಪ್ರತಿಯೊಬ್ಬರ ಜವಾಬ್ದಾರಿ ಹಂಚಿಕೆ ಮತ್ತು ಉತ್ತರದಾಯಿತ್ವ ಹೊಂದಿರುವ ವಿಶ್ವದ ಅತೀ ದೊಡ್ಡ ಅಭಿಯಾನದಲ್ಲಿ ದೇಶದ ನಗರ ಹಾಗೂ ಗ್ರಾಮೀಣ ಪ್ರದೇಶದ ಪ್ರತಿಯೊಬ್ಬ ಪ್ರಜೆಯೂ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರಧಾನಿ ತಮ್ಮ ಸಂದೇಶದಲ್ಲಿ ಕರೆ ನೀಡಿದ್ದಾರೆ.

*******

**ರಾಜ್ಯಾದ್ಯಂತ** ಇಂದು ಸ್ವಚ್ಛತೆಯೇ ಸೇವೆ ಅಭಿಯಾನದಡಿ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹಾವೇರಿಯಲ್ಲಿ ಸಾಮೂಹಿಕ ಶ್ರಮದಾನ ಕಾರ್ಯಕ್ರಮ ಈಗಾಗಲೇ ಆರಂಭವಾಗಿದ್ದು, ನಾಳೆಯವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ ತಿಳಿಸಿದ್ದಾರೆ. ಇಂದು 'ಸ್ವಚ್ಛತೆಯೇ ಸೇವೆ' ಎಂಬ ಬೃಹತ್ ಸ್ವಚ್ಛತಾ ಶ್ರಮದಾನವನ್ನು ಉತ್ತರ ಕನ್ನಡ ಜಿಲ್ಲೆಯಲ್ಲಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಹಮ್ಮಿಕೊಂಡಿದ್ದು, ಕಾರ್ಯಕ್ರಮದಲ್ಲಿ ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಉತ್ತರಕನ್ನಡ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕಾಂದೂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. **ದಾವಣಗೆರೆ** ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ನಿರಂತರವಾಗಿ ಸ್ವಚ್ಚತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. 'ಸ್ವಚ್ಛ ಆಸ್ಪತ್ರೆ ನಮ್ಮ ಆದ್ಯತೆ' ಘೋಷ ವಾಕ್ಯದಡಿ ನಿರಂತರ ಸ್ವಚ್ಚತಾ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ಷಣ್ಮುಖಪ್ಪ ಹೇಳಿದ್ದಾರೆ. **ಬೆಂಗಳೂರು ಗ್ರಾಮಾಂತರ ಜಿಲ್ಲೆಯ** ದೇವನಹಳ್ಳಿ ತಾಲ್ಲೂಕಿನ ಜಾಲಿಗೆ ಗ್ರಾಮ ಪಂಚಾಯಿತಿಯ ಜಾಲಿಗೆ ಗ್ರಾಮದ ಕೆರೆ ಮತ್ತು ಸುತ್ತಮುತ್ತಲಿನ ಆವರಣದಲ್ಲಿ ಸ್ವಚ್ಛತಾ ಹೀ ಸೇವಾ ಅಭಿಯಾನದಡಿ ಇಂದು ಶ್ರಮದಾನ ಕಾರ್ಯಕ್ರಮ ಆಯೋಜಿಸಲಾಗಿದೆ.

*******

**ಭಾರತದ ವೈವಿಧ್ಯತೆ ಮತ್ತು ಏಕತೆಯನ್ನು ಬೇರೆ** ರಾಷ್ಟ್ರಗಳಲ್ಲಿ ಕಾಣಲು ಸಾಧ್ಯವಿಲ್ಲ. ಭಿನ್ನ ಸಂಸ್ಕೃತಿಗಳ ಮಧ್ಯೇ ಸಮನ್ವಯ, ಸೌಹಾರ್ದತೆಗಳಿದ್ದಲ್ಲಿ ಅಂತಹ ದೇಶ ಪ್ರಗತಿ ಹೊಂದಲು ಸಾಧ್ಯ. ಸಂವಿಧಾನ ಜಾತ್ಯತೀತತೆ, ಸೌಹಾರ್ದತೆಯನ್ನು ಎತ್ತಿ ಹಿಡಿದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿರ್ಮಿಸಲಾಗಿರುವ ಬ್ಯಾರಿಸ್ ಸೌಹಾರ್ದ ಭವನವನ್ನು ನಿನ್ನೆ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಯಾರಿಗೂ ಕಾನೂನು ಕೈಗೆತ್ತಿಕೊಳ್ಳಲು ಅವಕಾಶವಿಲ್ಲ. ಎಷ್ಟೇ ರಾಜಕೀಯ ಶಕ್ತಿ ಹೊಂದಿದ್ದರೂ, ಕಾನೂನು ಕೈಗೆತ್ತಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

*******

**ತಮಿಳುನಾಡಿಗೆ ಕಾವೇರಿ ನೀರು ಹರಿಸುವ** ಆದೇಶಕ್ಕೆ ಸಂಬಂಧಿಸಿದಂತೆ ಕಾವೇರಿ ನೀರು ನಿರ್ವಹಣಾ ಮಂಡಳಿ ಮುಂದೆ ಮರು ಪರಿಶೀಲನಾ ಅರ್ಜಿಯನ್ನು ರಾಜ್ಯ ಸರ್ಕಾರ ನಿನ್ನೆ ಸಲ್ಲಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ಮರು ಪರಿಶೀಲನಾ ಅರ್ಜಿಯಲ್ಲಿ ತಮಿಳುನಾಡಿಗೆ ಕಾವೇರಿ ನೀರು ಹರಿಸಲು ಸಾಧ್ಯವಿಲ್ಲ ಮತ್ತು ಮೇಕೆದಾಟು ಯೋಜನೆಗೆ ಅನುಮತಿ ಕೊಡಬೇಕು ಎಂಬ ಎರಡು ಬೇಡಿಕೆಗಳನ್ನು ಮಂಡಿಸಲಾಗಿದೆ. ಪರಿಸ್ಥಿತಿ ಅವಲೋಕಿಸಿ, ಸುಪ್ರೀಂಕೋರ್ಟ್‌ಗೂ ಮರು ಪರಿಶೀಲನಾ ಅರ್ಜಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

*******

**ಮುನಿರಾಬಾದ್–ಮೆಹಬೂಬ್ ನಗರ್ ರೈಲು ಸಂಚಾರ ಸೇವೆಗೆ ಇಂದು** ಪ್ರಧಾನಮಂತ್ರಿ ನರೇಂದ್ರ ಮೋದಿ, ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಲಿದ್ದಾರೆ. ಮೆಹಬೂಬ್ ನಗರದಲ್ಲಿ ಜಕ್ಲೇರ್–ಕೃಷ್ಣಾ ಹೊಸ ರೈಲ್ವೇ ಮಾರ್ಗದ ಲೋಕಾರ್ಪಣೆ ಮತ್ತು ಕೃಷ್ಣಾದಲ್ಲಿ ರಾಯಚೂರು–ಕೃಷ್ಣಾ–ಕಾಚಿಗೂಡ ಡೆಮು ರೈಲು ಸಂಚಾರ ಸೇವೆಗೆ ಅವರು ಹಸಿರು ನಿಶಾನೆ ತೋರಲಿದ್ದಾರೆ. ಈ ಮೂಲಕ ರಾಯಚೂರು ಪ್ರಾಂತ್ಯದ ಜನರ 25 ವರ್ಷಗಳ ನಿರೀಕ್ಷೆ ಈಡೇರಲಿದೆ ಎಂದು ಸಂಸದ ರಾಜ ಅಮರೇಶ್ವರ ನಾಯಕ್ ತಿಳಿಸಿದ್ದಾರೆ. ನೂತನ ರೈಲ್ವೆ ಮಾರ್ಗ ಸೇವೆ ಆರಂಭದಿಂದ ಮುನಿರಾಬಾದ್ ಮತ್ತು ಮೆಹಬೂಬ್ ನಗರ್ ನಡುವೆ ಪ್ರಯಾಣದ ದೂರ ಮತ್ತು ವೇಳೆ ಕಡಿಮೆಯಾಗಲಿದ್ದು, ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಇಂದು ಲೋಕಾರ್ಪಣೆಯಾಗಲಿರುವ ನೂತನ ಮಾರ್ಗ ಕೃಷ್ಣಾ ಮೂಲಕ ಮಾಗನೂರು–ಮಕ್ತಲ್–ದೇವರಕದ್ರ–ಮೆಹಬೂಬ್‌ನಗರ್–ಕಾಚಿಗೂಡ ನಡುವೆ ಸಂಪರ್ಕ ಕಲ್ಪಿಸಲಿದೆ ಎಂದರು.

*******

**ಜನಸಾಮಾನ್ಯರ ಸಮಸ್ಯೆ**ಗಳಿಗೆ ಸ್ಪಂದಿಸುವ ಮೂಲಕ ಪರಿಹಾರ ಕಂಡುಕೊಳ್ಳುವ ಉದ್ದೇಶದೊಂದಿಗೆ ಜನತಾ ದರ್ಶನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ.ಪಾಟೀಲ ತಿಳಿಸಿದ್ದಾರೆ. ಗದಗನಲ್ಲಿ ನಿನ್ನೆ ಜನತಾದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜನಸಾಮಾನ್ಯರ ಅಹವಾಲುಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಲು ಅವಕಾಶವಿದ್ದು, ಆಡಳಿತ ವರ್ಗ ಈ ಕಾರ್ಯವನ್ನು ಅಚ್ಚುಕಟ್ಟಾಗಿ ಮಾಡಬೇಕು. ಸರ್ಕಾರದ ಸೌಲಭ್ಯಗಳು ಅರ್ಹರಿಗೆ ತಲುಪಿಸುವ ನಿಟ್ಟಿನಲ್ಲಿ ಆಡಳಿತ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸಬೇಕು. ಜನತಾ ದರ್ಶನದಲ್ಲಿ ಸ್ವೀಕರಿಸುವ ಅಹವಾಲುಗಳಿಗೆ ಕಾಲಮಿತಿಯೊಳಗೆ ಪರಿಹಾರ ನೀಡಬೇಕು ಎಂದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

*******

**ಮುಂಬರುವ ಚುನಾವಣೆಯಲ್ಲಿ ಮತದಾ**ನದ ಪ್ರಮಾಣ ಹೆಚ್ಚಿಸಲು ಯೋಜನೆ ರೂಪಿಸುವಂತೆ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ ಹೇಳಿದ್ದಾರೆ. ಬಾಗಲಕೋಟೆ ಜಿಲ್ಲಾ ಪಂಚಾಯತ ಸಭಾಭವನದಲ್ಲಿ ನಿನ್ನೆ ಸ್ವೀಪ್ ಚಟುವಟಿಕೆಗಳ ಕುರಿತು ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮತದಾನದ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿರುವ ಪ್ರತಿಯೊಂದು ಮತಗಟ್ಟೆ ಸುಸ್ಥಿತಿಯಲ್ಲಿ ಇರಬೇಕು. ಯುವಕರು, ಮಹಿಳೆಯರು ಹಾಗೂ ವಿಕಲಾಂಗಚೇತನರು ಹೆಚ್ಚಿನ ಪ್ರಮಾಣದಲ್ಲಿ ಮತದಾನ ಮಾಡುವ ನಿಟ್ಟಿನಲ್ಲಿ ಸ್ವೀಪ್ ಚಟುವಟಿಕೆಗಳನ್ನು ರೂಪಿಸಲು ತಿಳಿಸಿದರು.

*******

**ಮಂಡ್ಯ ಜಿಲ್ಲಾಡಳಿತದ ವತಿಯಿಂದ ಶ್ರೀರಂಗಪಟ್ಟಣ** ದಸರಾ ಮಹೋತ್ಸವವನ್ನು ಅಕ್ಟೋಬರ್ 16 ರಿಂದ ಮೂರು ದಿನಗಳ ಕಾಲ ಸಾಂಪ್ರದಾಯಿಕ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಶಾಸಕ ರಮೇಶ್ ಬಾಬು ಬಂಡಿ ಸಿದ್ದೇಗೌಡ

ತಿಳಿಸಿದ್ದಾರೆ. ಮಂಡ್ಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಮ್ಮ ನಾಡಿನ ಕಲೆ, ಸಂಸ್ಕೃತಿ, ಪರಂಪರೆಯನ್ನು ಸಾರುವ ದಸರಾ ಮಹೋತ್ಸವವನ್ನು ಎಲ್ಲಾ ಉಪಸಮಿತಿಗಳು ಸಮನ್ವಯ ಸಾಧಿಸಿ ಅತ್ಯುತ್ತಮವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಯಶಸ್ವಿಯಾಗಿಸಬೇಕು. ಅಚ್ಚುಕಟ್ಟಾಗಿ, ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

*******

**ಮೈಸೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ** ಯುವ ಸಬಲೀಕರಣ ಮತ್ತು ಕರ್ನಾಟಕ ಕ್ರೀಡಾ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿರುವ ದಸರಾ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಶಾಸಕ ತನ್ವೀರ್ ಸೇಠ್ ನಿನ್ನೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ದಸರಾ ಕ್ರೀಡಾಕೂಟಕ್ಕೆ ತನ್ನದೇ ಆದ ಇತಿಹಾಸವಿದೆ. ಈ ಕ್ರೀಡಾಕೂಟದಲ್ಲಿ ಸಾಧನೆ ಮಾಡಿದವರು ರಾಜ್ಯ ಹಾಗೂ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುತ್ತಾರೆ. ಕೇವಲ ಮೈಸೂರಿಗಷ್ಟೇ ಸೀಮಿತವಾಗದ ದಸರಾ ಕ್ರೀಡಾಕೂಟ, ರಾಜ್ಯಕ್ಕೆ ಕೀರ್ತಿಯನ್ನು ತಂದು ಕೊಡುತ್ತಿದೆ ಎಂದರು.

*******

## ಈಗ ಸಂಕ್ಷಿಪ್ತ ಸುದ್ದಿಗಳು

**ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ** ಇಲಾಖೆ, ಜಲ ಶಕ್ತಿ ಮಂತ್ರಾಲಯ, ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಸ್ವಚ್ಛ ಸರ್ವೇಕ್ಷಣ ಗ್ರಾಮೀಣ–2023 ಸಮೀಕ್ಷೆಯಲ್ಲಿ ಧಾರವಾಡ ಜಿಲ್ಲೆಯ ಕುರುಬಗಟ್ಟಿ ಗ್ರಾಮ ಪಂಚಾಯತಿಗೆ ರಾಜ್ಯಮಟ್ಟದ ಪ್ರಶಸ್ತಿ ಲಭಿಸಿದೆ. ಇಂದು ಬೆಂಗಳೂರಿನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ನೀಡುವರು ಎಂದು ಧಾರವಾಡ ಜಿಲ್ಲೆಯ ಕುರುಬಗಟ್ಟೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಎಂ ಧರೆಣ್ಣವರ ತಿಳಿಸಿದ್ದಾರೆ.

*******

**ಮಳೆಯ ಕೊರತೆಯಿಂದ ಬೆಳಗಾವಿ ಜಿಲ್ಲೆಗೆ** ಬರ ನಿರ್ವಹಣೆಗೆ ಸಂಬಂಧಿಸಿದಂತೆ, ಕಂದಾಯ, ಗ್ರಾಮೀಣಾಭಿವೃದ್ಧಿ, ಕೃಷಿ ಸೇರಿದಂತೆ ಎಲ್ಲ ಇಲಾಖೆಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******

**ಉತ್ತರಕನ್ನಡ ಜಿಲ್ಲೆಯ ಕರಾವಳಿ** ತಾಲೂಕುಗಳಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 66 ಕ್ಕೆ ಸಂಬಂಧಿಸಿದಂತೆ ಎಲ್ಲಾ ಕಾಮಗಾರಿಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಸೂಚಿಸಿದ್ದಾರೆ.

*******

**ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು ವಿಶೇಷವಾಗಿ** ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ಸಮೀಕ್ಷೆ ಕೈಗೊಳ್ಳಬೇಕು. ಮಕ್ಕಳು ಶಾಲೆಯಿಂದ ಹೊರಗುಳಿಯಲು ನಿಖರ ಕಾರಣ ತಿಳಿದು, ಪರಿಹಾರ ಕ್ರಮಗಳನ್ನು ಕೈಗೊಂಡು ಮಕ್ಕಳನ್ನು ಶಾಲೆಗೆ ಕರೆ ತರಲು ಆಂದೋಲನ ಕೈಗೊಳ್ಳಬೇಕು ಎಂದು ಚಿತ್ರದುರ್ಗ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******

**ಮಹಿಳೆಯರು ತಮ್ಮೊಂದಿಗೆ ತಮ್ಮ** ಮಕ್ಕಳನ್ನೂ ಆರೋಗ್ಯವಂತರನ್ನಾಗಿಸುವ ಮೂಲಕ ಸ್ವಾಸ್ಥ್ಯ ಸಮಾಜದ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾಕ್ಟರ್ ಗೋಪಾಲಕೃಷ್ಣ ಮನವಿ ಮಾಡಿದ್ದಾರೆ.

*******

**ವಿಜಯನಗರ ಜಿಲ್ಲೆಯ** ಆರು ತಾಲೂಕುಗಳ ಆರು ಗ್ರಾಮ ಪಂಚಾಯಿತಿಗಳಿಗೆ 2022 23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಲಭಿಸಿದೆ.

*******

**ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ದೇವನಹಳ್ಳಿ ತಾಲ್ಲೂಕಿನ ಜಾಲಿಗೆ** ಗ್ರಾಮ ಪಂಚಾಯಿತಿ, ದೊಡ್ಡಬಳ್ಳಾಪುರ ತಾಲ್ಲೂಕಿನ ಸಾಸಲು, ಹೊಸಕೋಟೆ ತಾಲ್ಲೂಕಿನ ಚೊಕ್ಕಹಳ್ಳಿ ಹಾಗೂ ನೆಲಮಂಗಲ ತಾಲ್ಲೂಕಿನ ಶ್ರೀನಿವಾಸಪುರ ಗ್ರಾಮ ಪಂಚಾಯಿತಿಗಳು 2022–23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆಯಾಗಿವೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾಕ್ಟರ್ ಕೆ.ಎನ್.ಅನುರಾಧ ತಿಳಿಸಿದ್ದಾರೆ.

*******

**2022–23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಚಾಮರಾಜ**ನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ತೆರಕಣಾಂಬಿ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲೂಕಿನ ಪುಣಜನೂರು, ಕೊಳ್ಳೇಗಾಲ ತಾಲೂಕಿನ ಸಿಂಗಾನಲ್ಲೂರು, ಹನೂರು ತಾಲೂಕಿನ ಲೊಕ್ಕನಹಳ್ಳಿ ಹಾಗೂ ಯಳಂದೂರು ತಾಲೂಕಿನ ಅಂಬಳೆ ಗ್ರಾಮ ಪಂಚಾಯಿತಿಗಳು ಆಯ್ಕೆಯಾಗಿವೆ ಎಂದು ಜಿಲ್ಲಾ ಪಂಚಾಯತ್ ಪ್ರಕಟಣೆ ತಿಳಿಸಿದೆ.

*******